ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಮುಖ್ಯಮಂತ್ರಿಯವರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 20/09/2019

# ಪರಿಶಿಷ್ಟರಿಗೆ ಸಬ್ಸಿಡಿ ಖುಷಿ

## ಸಾಲದ ಸಬ್ಸಿಡಿ ಶೇ. 50ರಿಂದ 75ಕ್ಕೇರಿಕೆ

**ಬೆಂಗಳೂರು:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಉದ್ಯಮಿಗಳಿಗೆ ಸರ್ಕಾರದಿಂದ ನೀಡುತ್ತಿರುವ ಸಾಲದ ಸಬ್ಸಿಡಿಯನ್ನು ಶೇ.50 ರಿಂದ ಶೇ.75ಕ್ಕೆ ಏರಿಕೆ ಮಾಡಲು ಸರ್ಕಾರ ನಿರ್ಧರಿಸಿದೆ ಎಂದು ಸಿಎಂ ಬಿ.ಎಸ್.ಯಡಿಯೂರಪ್ಪ ಹೇಳಿದರು.

ಗುರುವಾರ ವಾಣಿಜ್ಯ, ಕೈಗಾರಿಕಾ ಇಲಾಖೆ ಮತ್ತು ಎಸ್‌ಸಿ/ ಎಸ್‌ಟಿ ಉದ್ದಿಮೆದಾರರ ಸಂಘ ಆಯೋಜಿಸಿದ್ದ 'ಸರ್ಕಾರದ ಸವಲತ್ತುಗಳ ಅರಿವು ಮೂಡಿಸುವ ಕಾರ್ಯಕ್ರಮ'ದಲ್ಲಿ ಮಾತನಾಡಿದರು.

ಕರ್ನಾಟಕ ರಾಜ್ಯ ಹಣಕಾಸು ನಿಗಮದಲ್ಲಿ (ಕೆಎಸ್‌ಎಫ್‌ಸಿ) ಎಸ್‌ಸಿ-ಎಸ್‌ಟಿ ಉದ್ಯಮಿಗಳಿಗೆ ಸುಲಭವಾಗಿ ಸಾಲ ಸಿಗುವಂತಾಗಬೇಕು. ಎನ್‌ಪಿಎ (ನಾನ್ ಪರ್ಫಾರ್ಮಿಂಗ್ ಅಸೆಟ್ಸ್) ಕಾರಣ ನೀಡಿ ಅರ್ಜಿ ಪರಿಗಣಿಸದೇ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದರು. ಕೈಗಾರಿಕೆ ಸ್ಥಾಪಿಸಲು ಉದ್ದೇಶಿಸಿರುವ ನಿವೇಶನವನ್ನೇ ಅಡಮಾನವಾಗಿ ಪರಿಗಣಿಸಿ ಸಾಲ ಮಂಜೂರು ಮಾಡಲು ಕೆಎಸ್‌ಎಫ್‌ಸಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

### 1 ಕೋಟಿ ಗುತ್ತಿಗೆಯಲ್ಲೂ ಪರಿಶಿಷ್ಟರಿಗೆ ಮೀಸಲು

ರಾಜ್ಯದಲ್ಲಿ ಹಾಲಿ ಜಾರಿಯಲ್ಲಿರುವ 50 ಲಕ್ಷ ರೂ ಅಥವಾ ಅದಕ್ಕಿಂತ ಕಡಿಮೆ ಮೊತ್ತದ ಕಾಮಗಾರಿಗಳಲ್ಲಿ ಎಸ್‌ಸಿ / ಎಸ್‌ಟಿ ಗುತ್ತಿಗೆದಾರರಿಗೆ ಮೀಸಲಾತಿ ನೀಡುತ್ತಿದ್ದು, ಇದನ್ನು ಒಂದು ಕೋಟಿ ರೂ.ಗೆ ಏರಿಕೆ ಮಾಡುವ ಭರವಸೆ ನೀಡಿದರು. ರಾಜಕೀಯದಲ್ಲಿ ಪರಿಶಿಷ್ಟರು ನೆಮ್ಮದಿಯಿಂದ ಬದುಕಲು ಬೇಕಿರುವ ವಾತಾವರಣ. ನಿರ್ಮಿಸಲು ಶ್ರಮಿಸುವುದಾಗಿ ಹೇಳಿದರು.